ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಆ/315/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:28.01.2023

## ಸುತ್ತೋಲೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸುವ ಹಾಗೂ ಪ್ರಸ್ತುತ 2022-23ನೇ ಶೈಕ್ಷಣಿಕ ಸಾಲಿಗೆ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022.
2. ಸರ್ಕಾರದ ತಿದ್ದುಪಡಿ ಆದೇಶ ಸಂಖೆ : ಇಡಿ 242 ಡಿಸಿಇ 2021(ಇ), ದಿ:24.01.2022.
3. ಸರ್ಕಾರಿ ಆದೇಶ ಸಂಖ್ಯೆ: ಇಡಿ 18 ಡಿಸಿಇ 2023, ಬೆಂಗಳೂರು, ದಿನಾಂಕ:27.01.2023.

* * * * * *

ಉಲ್ಲೇಖಿತ ಸರ್ಕಾರದ ಆದೇಶಗಳ ಮೇರೆಗೆ, 2021-22ನೇ ಶೈಕ್ಷಣಿಕ ಸಾಲಿಗೆ ನೇಮಕಗೊಂಡು, ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ದಿನಾಂಕ:31.01.2023ರವರೆಗೆ ವಿಸ್ತರಿಸಲು ಅನುಮತಿ ನೀಡಿರುವುದನ್ನು ಪರಿಷ್ಕರಿಸಿ, ದಿನಾಂಕ:28.01.2023ರವರೆಗೆ ಮಾತ್ರ ವಿಸ್ತರಿಸಿ, ದಿನಾಂಕ:30.01.2023ರಂದು ಕಡ್ಡಾಯವಾಗಿ ಸೇವೆಯಿಂದ ಬಿಡುಗಡೆಗೊಳಿಸುವಂತೆ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ. ಅತಿಥಿ ಉಪನ್ಯಾಸಕರಿಗೆ ಅವರು ಸಲ್ಲಿಸಿದ ಸೇವಾ ಅವಧಿಗೆ ಅನುಗುಣವಾಗಿ ಗೌರವಧನವನ್ನು ಪಾವತಿಸುವುದು.

ಮುಂದುವರೆದು, ಈ ಕಛೇರಿಯ ದಿನಾಂಕ:03.01.2023ರ ಪ್ರಕಟಣೆಯಂತೆ ಪ್ರಸ್ತುತ 2022-23ನೇ ಶೈಕ್ಷಣಿಕ ಸಾಲಿಗೆ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಉಲ್ಲೇಖ-(1) & (2) ರ ಸರ್ಕಾರದ ಆದೇಶಗಳನ್ವಯ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು. ಈ ಸಂಬಂಧ ಆನ್‌ಲೈನ್ ಕೌನ್ಸಿಲಿಂಗ್ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಪ್ರಕಟಿಸಲಾಗಿದ್ದು, ಸಂಬಂಧಪಟ್ಟ ಅಭ್ಯರ್ಥಿಗಳು ಸದರಿ ವೇಳಾಪಟ್ಟಿಯನ್ವಯ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ತಿಳಿಸಲಾಗಿದೆ.

| ಕ್ರ. ಸಂ. | ವಿವರ | ದಿನಾಂಕ |
|---|---|---|
| 1. | ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಣೆ | 30.01.2023 |
| 2. | ಅಂತಿಮ ಮೆರಿಟ್ ಪಟ್ಟಿ ಮತ್ತು ಕಾರ್ಯಭಾರ ಪ್ರಕಟಣೆ | 03.02.2023 |
| 3. | ಅಂತಿಮ ಮೆರಿಟ್ ಪಟ್ಟಿಯನ್ವಯ ವಿಷಯವಾರು ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಗಳು | 04.02.2023 ರಿಂದ 08.02.2023 |
| 4. | ಆಯ್ಕೆ ಪಟ್ಟಿ ಪ್ರಕಟಣೆ | 09.02.2023 |
| 5. | ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ದಿನಾಂಕ | 10.02.2023 |

**ಸೂಚನೆ:**

1. ಈಗಾಗಲೇ ದಿನಾಂಕ:03.01.2023ರ ಪ್ರಕಟಣೆಯಲ್ಲಿ ತಿಳಿಸಿರುವಂತೆ, ಅತಿಥಿ ಉಪನ್ಯಾಸಕರ ಆಯ್ಕೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ನೀಡಿ, ತದನಂತರ ದಿನಾಂಕ:10.01.2023 ರ ಪ್ರಕಟಣೆಯಲ್ಲಿ ಸಲ್ಲಿಸಿದ ಅರ್ಜಿಯಲ್ಲಿನ ವಿವರಗಳ ತಿದ್ದುಪಡಿಗೂ ಸಹ ಅವಕಾಶ ನೀಡಲಾಗಿತ್ತು. ಆದಾಗ್ಯೂ, ಮೇಲೆ ತಿಳಿಸಿರುವ ವೇಳಾಪಟ್ಟಿಯಂತೆ ದಿನಾಂಕ:30.01.2023 ರಂದು ತಾತ್ಕಾಲಿಕ ಮೆರಿಟ್ ಪಟ್ಟಿ ಪ್ರಕಟಿಸಿದ ನಂತರವೂ ಸಲ್ಲಿಸಿರುವ ಮಾಹಿತಿಯಲ್ಲಿ ವ್ಯತ್ಯಾಸಗಳಿದ್ದಲ್ಲಿ ಸದರಿ ವಿವರಗಳನ್ನು ಆನ್‌ಲೈನ್ ಅರ್ಜಿಯಲ್ಲಿ ತಿದ್ದುಪಡಿ ಮಾಡಲು ದಿನಾಂಕ:02.02.2023 ರ ಸಂಜೆ 5:00 ಗಂಟೆಯವರೆಗೆ ಅವಕಾಶ ನೀಡಲಾಗಿದೆ.

. . . . . 2

2. ತಿದ್ದುಪಡಿಗೆ ಅವಕಾಶ ನೀಡಿದ ದಿನಾಂಕ:02.02.2023 ರ ಸಂಜೆ 5:00 ಗಂಟೆಯ ನಂತರ ಆನ್‌ಲೈನ್ ಮೂಲಕವಾಗಲೀ ಅಥವಾ ಖುದ್ದಾಗಿ/ಪತ್ರ ಮುಖೇನ ಸಲ್ಲಿಸುವ ಯಾವುದೇ ಮನವಿಯನ್ನು ಸಹ ಯಾವುದೇ ಕಾರಣಕ್ಕೂ ಪರಿಣಿಸಲಾಗುವುದಿಲ್ಲ.

3. ಅಭ್ಯರ್ಥಿಗಳು ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದ್ದಲ್ಲಿ, ಅಂತಹ ಅಭ್ಯರ್ಥಿಗಳನ್ನು ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಿ, ಅವರುಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂಬುದಾಗಿ ಮತ್ತೊಮ್ಮೆ ಪುನರುಚ್ಚರಿಸಲಾಗಿದೆ.

4. ಈ ಸುತ್ತೋಲೆಯನ್ನು ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳು ತಮ್ಮ ಕಾಲೇಜುಗಳ ನೋಟೀಸ್ ಬೋರ್ಡ್‌ನಲ್ಲಿ ಕಡ್ಡಾಯವಾಗಿ ಪ್ರಕಟಿಸುವುದರೊಂದಿಗೆ, ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಕುರಿತು ಅತಿಥಿ ಉಪನ್ಯಾಸಕ ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡುವಂತೆ ಸೂಚಿಸಲಾಗಿದೆ.

5. ಅತಿಥಿ ಉಪನ್ಯಾಸಕರ ಆಯ್ಕೆಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಂತರ್ಜಾಲ ತಾಣ https://dce.karnataka.gov.in ರಲ್ಲಿ ಪ್ರಕಟಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಸದರಿ ಅಂತರ್ಜಾಲ ತಾಣವನ್ನು ಪ್ರತಿನಿತ್ಯ ಗಮನಿಸಲು ತಿಳಿಸಲಾಗಿದೆ.

**ಆಯುಕ್ತರು**
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

**<u>ಇವರಿಗೆ, – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ;</u>**

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ
3) ಮಾ.ತಂ. ಅಧಿಕಾರಿ, ಮ್ಯಾನೇಜರ್, ಆಯವ್ಯಯ, ಕಾನೂನು ಕೋಶ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು.
4) ಕಛೇರಿ ಪ್ರತಿ.